ಶನಿವಾರ 08.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 94
Digital Varthe Kannada Daily
Volume 01 - Issue 94
Saturday 08.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

## ರಷ್ಯಾದಲ್ಲಿ ಕಾಣೆಯಾಗಿದ್ದ ಭಾರತೀಯ ಮೂಲದ ವೈದ್ಯ ವಿದ್ಯಾರ್ಥಿಯ ಶವ ಡ್ಯಾಮ್‌ನಲ್ಲಿ ಪತ್ತೆ



**ಮಾಸ್ಕೋ:** 19 ದಿನಗಳ ಹಿಂದೆ ರಷ್ಯಾದ ಉಫಾ ನಗರದಲ್ಲಿ ನಾಪತ್ತೆಯಾಗಿದ್ದ 22 ವರ್ಷದ ಭಾರತೀಯ ವಿದ್ಯಾರ್ಥಿಯ ಮೃತದೇಹ ಡ್ಯಾಮ್ ಒಂದರಲ್ಲಿ ಪತ್ತೆಯಾಗಿದೆ.

ವಿದ್ಯಾರ್ಥಿಯನ್ನು ರಾಜಸ್ಥಾನದ ಲಕ್ಷ್ಮಣಗಢದ ಕಫನ್‌ವಾಡ ಗ್ರಾಮದ ನಿವಾಸಿ ಅಜಿತ್ ಸಿಂಗ್ ಚೌಧರಿ ಎಂದು ಗುರುತಿಸಲಾಗಿದೆ. 2023 ರಲ್ಲಿ ಎಂಬಿಬಿಎಸ್ ಶಿಕ್ಷಣಕ್ಕಾಗಿ ಬಶ್ಕಿರ್ ರಾಜ್ಯದ ವೈದ್ಯಕೀಯ ವಿಶ್ವವಿದ್ಯಾಲಯಕ್ಕೆ ಸೇರಿದ್ದರು. ಅ.19 ರಂದು ಹಾಲು ಖರೀದಿಸಲು ಹೋಗುವುದಾಗಿ ಹೇಳಿ ಬೆಳಿಗ್ಗೆ 11 ಗಂಟೆ ಸುಮಾರಿಗೆ ತನ್ನ ಹಾಸ್ಟೆಲ್‌ನಿಂದ ತೆರಳಿದ್ದರು. ಆದರೆ ವಾಪಸ್ ಬಂದಿರಲಿಲ್ಲ ಎಂದು ಮೂಲಗಳು ತಿಳಿಸಿವೆ

19 ದಿನಗಳ ಹಿಂದೆ ನದಿ ದಂಡೆಯ ಬಳಿ ಚೌಧರಿಯವರ ಬಟ್ಟೆ, ಮೊಬೈಲ್ ಫೋನ್ ಮತ್ತು ಶೂಗಳು ಪತ್ತೆಯಾಗಿದ್ದವು. ಈಗ ಅವರ ಮೃತದೇಹ ವೈಟ್ ರಿವರ್ ಪಕ್ಕದಲ್ಲಿರುವ ಅಣೆಕಟ್ಟಿನಲ್ಲಿ ಪತ್ತೆಯಾಗಿದೆ ಎಂದು ಅಲ್ವಾರ್ ಸರಸ್ ಡೈರಿ ಅಧ್ಯಕ್ಷ ನಿತಿನ್ ಸಾಂಗ್ವಾನ್ ತಿಳಿಸಿದ್ದಾರೆ. ರಷ್ಯಾದಲ್ಲಿರುವ ಭಾರತೀಯ ರಾಯಭಾರ ಕಚೇರಿ ಚೌಧರಿ ಅವರ ಸಾವಿನ ಬಗ್ಗೆ ಅವರ ಕುಟುಂಬಕ್ಕೆ ಮಾಹಿತಿ ನೀಡಿದೆ. ವಿದ್ಯಾರ್ಥಿಯ ಶವವನ್ನು ಭಾರತಕ್ಕೆ ತರಬೇಕು. ಅಹಿತಕರ ಘಟನೆ ಸಂಭವಿಸಿ ಆತ ಸಾವಿಗೀಡಾಗಿದ್ದಾನೆ. ಇದನ್ನು ಸಂಪೂರ್ಣ ಗಂಭೀರತೆಯಿಂದ ತನಿಖೆ ಮಾಡಬೇಕು ಎಂದು ಕಾಂಗ್ರೆಸ್ ಮುಖಂಡರು ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರನ್ನು ಒತ್ತಾಯಿಸಿದ್ದಾರೆ. ವಿಶ್ವವಿದ್ಯಾಲಯದಲ್ಲಿ ಓದುತ್ತಿರುವ ಅಜಿತ್ ಸ್ನೇಹಿತರು ಶವದ ಗುರುತನ್ನು ಗುರುತಿಸಿದ್ದಾರೆ. ವಿದ್ಯಾರ್ಥಿಯ ಸಾವಿನ ಕುರಿತು ವಿಶ್ವವಿದ್ಯಾಲಯ ಇನ್ನೂ ಯಾವುದೇ ಹೇಳಿಕೆ ನೀಡಿಲ್ಲ ಎಂದು ವರದಿಯಾಗಿದೆ.

## ಶೀಲದ ಮೇಲೆ ಶಂಕೆ ಚಾಕುವಿನಿಂದ ಇರಿದು ಪತ್ನಿಯನ್ನೇ ಕೊಂದ ಪಾಪಿ ಪತಿ

**ಬೆಂಗಳೂರು**: ಶೀಲ ಶಂಕಿಸಿ ಪತಿಯೇ ಪತ್ನಿಯನ್ನ ಕೊಲೆ ಮಾಡಿರುವ ಘಟನೆ ಬೆಂಗಳೂರಿನ ಅಮೃತಹಳ್ಳಿಯ ಗಂಗಮ್ಮ ಲೇಔಟ್‌ನಲ್ಲಿ ನಡೆದಿದೆ. ತರಕಾರಿ ಅಂಗಡಿಯಲ್ಲಿ ಕೆಲಸ ಮಾಡಿಕೊಂಡಿದ್ದ ಅಂಜಲಿ (20) ಮೃತ ಮಹಿಳೆಯಾಗಿದ್ದು, ಟ್ರಾವೆಲ್ಸ್ ಕಚೇರಿಯಲ್ಲಿ ಡ್ರೈವರ್ ಆಗಿದ್ದ ಆರೋಪಿ ರವಿಚಂದ್ರನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಘಟನಾ ಸ್ಥಳಕ್ಕೆ ಈಶಾನ್ಯ ವಿಭಾಗ ಡಿಸಿಪಿ ಸಜೀತ್ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.



ಪಾವಗಡ ಮೂಲದ ಅಂಜಲಿ, ಸುರಪುರ ಮೂಲದವನಾದ ರವಿಚಂದ್ರನನ್ನ ಮದುವೆಯಾಗಿದ್ದರು. ಮದುವೆ ನಂತರ ದಂಪತಿ ಅಮೃತಹಳ್ಳಿಯಲ್ಲಿ ವಾಸವಿದ್ದರು. ಪತ್ನಿಯ ಶೀಲದ ಬಗ್ಗೆ ಶಂಕಿಸಿದ್ದ ರವಿಚಂದ್ರ ಮೊಣಕಾಲಿನಿಂದ ಒದ್ದು ಹಲ್ಲೆ ನಡೆಸಿದ್ದಲ್ಲದೆ, ಚಾಕುವಿನಿಂದ ಕುತ್ತಿಗೆ ಇರಿದು ಬರ್ಬರ ಹತ್ಯೆ ಮಾಡಿದ್ದಾನೆ. ರಕ್ತದ ಮಡುವಿನಿನಲ್ಲಿ ಒದ್ದಾಡಿರುವ ಅಂಜಲಿ ಕೊನೆಯುಸಿರೆಳೆದಿದ್ದಾಳೆ. ಘಟನಾ ಸ್ಥಳಕ್ಕೆ ಸೋಕೋ ಟೀಂ ಭೇಟಿ ನೀಡಿದ್ದು, ತನಿಖೆ ನಡೆಸಿದೆ. ಘಟನೆ ಬಗ್ಗೆ ಈಶಾನ್ಯ ವಿಭಾಗ ಡಿಸಿಪಿ ಸಜೀತ್ ಮಾಹಿತಿ ನೀಡಿದ್ದು, ಅಮೃತಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಬೆಳಗಿನ ಜಾವ ಕೊಲೆ ನಡೆದಿದೆ. ಮೇಲ್ನೋಟಕ್ಕೆ ಪತ್ನಿ ಶೀಲ ಶಂಕಿಸಿ ಪತಿಯೇ ಕೊಲೆ ಮಾಡಿದ್ದಾನೆ. ಘಟನಾ ಸ್ಥಳಕ್ಕೆ ಪಲೀಸರು ಬಂದಾಗ ಅಂಜಲಿಗೆ ಇನ್ನೂ ಜೀವ ಇರುವುದು ಕಂಡುಬಂದಿದೆ. ಹೀಗಾಗಿ ಕೋಡಲೇ ಅಮೃತಹಳ್ಳಿ ಇನ್ಸ್ ಪೆಕ್ಟರ್ ಅಂಬರೀಶ್ ಮತ್ತು ಸಿಬ್ಬಂದಿ ಆಕೆಯನ್ನ ಆಸ್ಪತ್ರೆಗೆ ದಾಖಲಿಸಲು ಯತ್ನಿಸಿದ್ದಾರೆ. ಆದರೆ, ಗಭೀರವಾಗಿ ಗಾಯಗೊಂಡಿದ್ದ ಆಕೆ ಮಾರ್ಗ ಮಧ್ಯೆ ಮೃತಪಟ್ಟಿದ್ದಾಳೆ. ಅಂಜಲಿ ಮತ್ತು ರವಿಚಂದ್ರದದು ಎರಡನೇ ಮದುವೆ ಎಂಬ ಮಾಹಿತಿ ಇದ್ದು, ಆರೋಪಿಯ ವಿಚಾರಣೆ ನಡೆಸಲಾಗುತ್ತಿದೆ ಎಂದಿದ್ದಾರೆ.

### ಬಿಯರ್ ಬಾಟಲಿನಿಂದ ಹೊಡೆದು ಕೊಲೆ

ಬಿಯರ್ ಬಾಟಲಿನಿಂದ ಹೊಡೆದು ವ್ಯಕ್ತಿಯಯನ್ನು ಕೊಲೆ ಮಾಡಿರುವ ಘಟನೆ ಬೆಂಗಳೂರಿನ ಬನಶಂಕರಿ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ತ್ಯಾಗರಾಜನಗರ ನಿವಾಸಿ ಸುರೇಶ್ (45) ಕೊಲೆಯಾದ ವ್ಯಕ್ತಿಯಾಗಿದ್ದು, ಆರೋಪಿ ವೇಲುವನ್ನು ವಶಕ್ಕೆ ಪಡೆಯಲಾಗಿದೆ. ರಾತ್ರಿ ವೇಲು ಹಾಗೂ ಇತರೆ ಸ್ನೇಹಿತರೊಂದಿಗೆ ಪಾರ್ಟಿ ಮಾಡಲು ಸುರೇಶ್ ತೆರಳಿದ್ದರು. ಆಟೋದಲ್ಲಿ ಕುಡಿದು ಇವರು ಸುತ್ತಾಟ ನಡೆಸಿದ್ದು, ಈ ವೇಳೆ ವೇಲು ಹಾಗೂ ಸುರೇಶ್ ನಡುವೆ ಕ್ಷುಲಕ ವಿಚಾರಕ್ಕೆ ಕಿರಿಕ್ ಆಗಿದೆ. ಜಗಳ ವಿಕೋಪಕ್ಕೆ ಹೋಗಿ ಸುರೇಶ್ ಮೇಲೆ ವೇಲು ಬಿಯರ್ ಬಾಟಲ್ ನಿಂದ ಹಲ್ಲೆ ನಡೆಸಿದ್ದಾನೆ. ಈ ವೇಳೆ ಗಂಭೀರ ಗಾಯಗೊಂಡು ಸುರೇಶ್ ಸಾವನ್ನಪ್ಪಿದ್ದಾರೆ.

## ವೈದ್ಯರ ನಿರ್ಲಕ್ಷ್ಯಕ್ಕೆ ಅವಳಿ-ಜವಳಿ ಮಕ್ಕಳು ಸಾವು




**ವಿಜಯನಗರ:** ವಿಜಯನಗರ ಜಿಲ್ಲೆಯ ಹೊಸಪೇಟೆ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ವೈದ್ಯಕೀಯ ನಿರ್ಲಕ್ಷ್ಯಕ್ಕೆ ಅವಳಿ-ಜವಳಿ ಗಂಡು ಮಕ್ಕಳು ಸಾವನ್ನಪ್ಪಿರುವ ಘಟನೆ ನಡೆದಿದೆ. ಹಗರಿಬೊಮ್ಮನಹಳ್ಳಿ ಪಟ್ಟಣದ ರಾಮನಗರ ನಿವಾಸಿ ಪರ್ವೀನ್ ಬಾನು ಮತ್ತು ಹುಸೇನ್ ಭಾಷಾ ದಂಪತಿಗಳಾಗಿದ್ದು, ಈ ದಂಪತಿಗೆ ಮದ್ವೆಯಾಗಿ 7 ವರ್ಷಗಳ ನಂತರ ಅವಳಿ ಗಂಡು ಮಕ್ಕಳ ಜನನವಾಗಿದೆ. ಆದರೆ ಹುಟ್ಟಿದ ಕೆಲವೇ ಗಂಟೆಗಳಲ್ಲಿ ಸಾವನ್ನಪ್ಪಿದ್ದು, ತಾಯಿ ಪರ್ವೀನ್ ಬಾನು ಆಸ್ಪತ್ರೆಯ ವೈದ್ಯರ ಮೇಲೆ ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ಪರ್ವೀನ್ ಬಾನು ಅವರು ನಿನ್ನೆ (ಗುರುವಾರ) ಮಧ್ಯಾಹ್ನ ಸುಮಾರು 1:30 ಗಂಟೆಗೆ ಹೊಸಪೇಟೆ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಾಗಿದ್ದರು. ಆದರೆ, ರಾತ್ರಿ 8:30 ಗಂಟೆವರೆಗೂ ಯಾವುದೇ ವೈದ್ಯರು ಅವರನ್ನು ಪರೀಕ್ಷಿಸಲಿಲ್ಲ ಎಂದು ಆರೋಪಿಸಲಾಗಿದೆ ನಾನು ಅವಳಿ ಮಕ್ಕಳಿಗೆ ಜನ್ಮ ನೀಡಿದೆ, ಆದರೆ ಮಕ್ಕಳ ಮುಖ ನೋಡುವ ಭಾಗ್ಯವೂ ನನಗಿಲ್ಲ," ಎಂದು ಕಣ್ಣೀರು ಹಾಕಿದ್ದಾರೆ. "ನನ್ನನ್ನು ಯಾರೂ ಕೂಡ ಸರಿಯಾಗಿ ನೋಡಲಿಲ್ಲ, ಕೇವಲ ಸ್ಟಾಫ್ ನರ್ಸ್ ಮಾತ್ರ ನೋಡಿದ್ದಾರೆ. ವೈದ್ಯರು 'ಚಾರ್ಜ್ ತಗೊಂಡು ಬಾ' ಅಂತ ನರ್ಸ್‌ಗಳಿಗೆ ಹೇಳ್ತಾರೆ. ನನ್ನನ್ನು ಹೆರಿಗೆಗೆ ಕರಕೊಂಡು ಹೋಗಲಿಲ್ಲ," ಎಂದು ಆಸ್ಪತ್ರೆಯ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

"ನಾನು 7 ಗಂಟೆಗಳ ಕಾಲ ಕೂಗಾಡಿದೆ. ಆದರೆ ಯಾರೂ ಬಂದಿಲ್ಲ. ಒಂದು ಮಗು ಗರ್ಭಕೋಶದಲ್ಲೇ ಸತ್ತುಹೋಯಿತು, ಎರಡನೆಯದು ಹೊರಬಂದ ನಂತರ ಕೇವಲ 15 ನಿಮಿಷ ಬದುಕಿತ್ತು" ಎಂದು ಪರ್ವೀನ್ ಹೇಳಿದ್ದಾರೆ.

ಹಗರಿಬೊಮ್ಮನ ಹಳ್ಳಿಯಲ್ಲಿ ಅರವಳಿಕೆ ತಜ್ಞರು (ಗೈನಕಾಲಜಿಸ್ಟ್) ಲಭ್ಯವಿಲ್ಲದ ಕಾರಣ ಪರ್ವೀನ್ ಬಾನು ಅವರನ್ನು ಹೊಸಪೇಟೆಯ ಆಸ್ಪತ್ರೆಗೆ ಕಳುಹಿಸಲಾಗಿತ್ತು. ಅಲ್ಲಿ ವೈದ್ಯರು 'ಬಿಪಿ ಜಾಸ್ತಿ ಇದೆ' ಎಂಬ ಕಾರಣ ಹೇಳಿ ಹೆರಿಗೆ ಮಾಡಲು ಮುಂದೂಡಿದರು ಎಂದು ಕುಟುಂಬದವರು ಆರೋಪಿಸಿದ್ದಾರೆ. ಪರ್ವೀನ್ ಬಾನು ಅವರ ಕುಟುಂಬದವರು ವೈದ್ಯರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ಫೋನ್ ಪೇ ಮೂಲಕ ಪರಿಚಯವಾಗಿ ಲವ್ವಿ ಡವ್ವಿ ಗರ್ಭಿಣಿಯಾದ 9ನೇ ತರಗತಿ ವಿದ್ಯಾರ್ಥಿನಿ



**ರಾಯಚೂರು:** ಕೊಪ್ಪಳ ಪ್ರೀತಿ-ಪ್ರೇಮದ ಬಲೆಗೆ ಬಿದ್ದು 9ನೇ ತರಗತಿ ವಿದ್ಯಾರ್ಥಿನಿ ಗರ್ಭಿಣಿಯಾಗಿರುವ ಆಘಾತಕಾರಿ ಘಟನೆ ರಾಯಚೂರು ಜಿಲ್ಲೆಯ ಮಸ್ಕಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಸಂತ್ರಸ್ತ ಯುವತಿಗೆ ರಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಆರೋಪಿ ಶಿವಮೂರ್ತಿ(25) ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ. ಆರೋಪಿ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಸಂತ್ರಸ್ತ ವಿದ್ಯಾರ್ಥಿನಿಯ ತಂದೆ ಚಿಕನ್ ಶಾಪ್ ಹೊಂದಿದ್ದು, ಇಲ್ಲಿ ಮಾಂಸ ಖರೀದಿಗೆ ಬಂದಿದ್ದ ಆರೋಪಿ ಶಿವಮೂರ್ತಿ ಫೋನ್ ಪೇ ಮೂಲಕ ಹಣ ಪಾವತಿಸಿದ್ದ. ಬಳಿಕ ಫೋನ್ ಪೇ ಮಾಡಿರುವ ಮೊಬೈಲ್ ಸಂಖ್ಯೆಯನ್ನ ಆತ ಸಂಪರ್ಕಿಸಿದ್ದು, ಸಂತ್ರಸ್ತೆಯ ಪರಿಚಯವಾಗಿದೆ. ಬಳಿಕ ಇಬ್ಬರ ನಡುವೆ ಪ್ರೀತಿ ಆರಂಭವಾಗಿದ್ದು, ದೈಹಿಕ ಸಂಪರ್ಕದವರೆಗೂ ಹೋಗಿದೆ. ಈ ನಡುವೆ ಅಕ್ಟೋಬರ್ 30ರ ರಾತ್ರಿ ಸಂತ್ರಸ್ತೆ ನಾಪತ್ತೆಯಾಗಿದ್ದು, ಮನೆಯವರೆಲ್ಲ ಸೇರಿ ಹುಡುಕಿದರೂ ಆಕೆಯ ಸುಳಿವು ಸಿಕ್ಕಿರುವುದಿಲ್ಲ. ಈ ಹಿನ್ನಲೆ ಪೋಷಕರು ಮಗಳು ನಾಪತ್ತೆಯಾಗಿದ್ದಾಳೆ ಎಂದು ದೂರು ದಾಖಲಿಸಿದ್ದರು. ಪೊಲೀಸರು ಕೇಸ್ ಬೆನ್ನುಹತ್ತಿದಾಗ ನಾಪತ್ತೆಯಾಗಿರೋ ಬಾಲಕಿ ಗರ್ಭಿಣಿ ಎಂಬ ವಿಷಯ ಬೆಳಕಿಗೆ ಬಂದಿದೆ. ಆಟೋ ಪಲ್ಟಿಯಾಗಿ ಕಾಲೇಜು ವಿದ್ಯಾರ್ಥಿನಿ ಸ್ಥಳದಲ್ಲೇ ಸಾವನ್ನಪ್ಪಿದ್ದು, ಐವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಕೊಪ್ಪಳ ಜಿಲ್ಲೆ ಗಂಗಾವತಿ ತಾಲೂಕಿನ ವಡ್ಡರಹಟ್ಟಿ ಬಳಿ ನಡೆದಿದೆ. ಬಸಾಪಟ್ಟಣದ ನಿವಾಸಿ ಪ್ರೇಮಾ(18) ಮೃತ ವಿದ್ಯಾರ್ಥಿನಿಯಾಗಿದ್ದು, ಬಸಾಪಟ್ಟಣದಿಂದ ಗಂಗಾವತಿ ಕಾಲೇಜಿಗೆ ಪ್ರೇಮಾ ತೆರಳುತ್ತಿದ್ದರು ಎನ್ನಲಾಗಿದೆ. ಗಾಯಾಳುಗಳನ್ನ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದ್ದು, ಗಂಗಾವತಿ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

## ಹುಲಿ ದಾಳಿಗೆ ಮತ್ತೊಬ್ಬ ರೈತ ಬಲಿ – 15 ದಿನಗಳಲ್ಲಿ ಮೂರನೇ ಪ್ರಕರಣ



**ಮೈಸೂರು**: ಜಿಲ್ಲೆ ಯಲ್ಲಿ ಹುಲಿ ದಾಳಿಗೆ ಮತ್ತೊಬ್ಬ ರೈತ ಬಲಿಯಾ ಗಿದ್ದಾರೆ. ಈ ಮೂಲಕ ಕಳೆದ 15 ದಿನಗಳಲ್ಲಿ ಒಟ್ಟು ಮೂರು ರೈತರು ಹುಲಿ ದಾಳಿಗೆ ಬಲಿಯಾಗಿರುವುದು ಕಂಡುಬಂದಿದೆ. ಮೈಸೂರು ಜಿಲ್ಲೆಯಲ್ಲಿ ವನ್ಯಜೀವಿ ಮತ್ತು ಮಾನವ ಸಂಘರ್ಷ ತಾರಕಕ್ಕೇರುತ್ತಿದೆ. ಒಂದೇ ತಿಂಗಳಲ್ಲಿ ಒಟ್ಟು ಮೂವರು ರೈತರು ಹುಲಿ ದಾಳಿಗೆ ಬಲಿಯಾಗಿದ್ದಾರೆ. ಇನ್ನೊಬ್ಬ ರೈತ ಹುಲಿ ದಾಳಿಯಿಂದ ಗಾಯಗೊಂಡ ಜೀವನ್ಮರಣ ಹೋರಾಟ ನಡೆಸುತ್ತಿದ್ದಾರೆ. ಹೌ ಆರ್‌ಎಫ್‌ಓ ಮೇಲೆ ಹಲ್ಲೆಗೆ ಯತ್ನ



ಹುಲಿ ದಾಳಿಯಿಂದ ರೊಚ್ಚಿಗೆದ್ದ ಗ್ರಾಮಸ್ಥರು ಆರ್‌ಎಫ್‌ಓ ಮೇಲೆ ಹಲ್ಲೆಗೆ ಯತ್ನಿಸಿದ್ದಾರೆ. ಆರ್‌ಎಫ್‌ಓ ಅಮೃತಾ ಮೇಲೆ ಗ್ರಾಮಸ್ಥರು ಹಲ್ಲೆಗೆ ಯತ್ನಿಸಿದ ಘಟನೆ ಸರಗೂರು ತಾಲೂಕಿನ ಹೆಗ್ಗೂಡಿಲು ಗ್ರಾಮದಲ್ಲಿ ನಡೆದಿದೆ. ಹುಲಿ ದಾಳಿಯಿಂದ ರೈತ ದಂಡನಾಯಕ ಮೃತ ಪಟ್ಟಿದ್ದ ಕಾರಣ ಘಟನಾ ಸ್ಥಳಕ್ಕೆ ಬಂದಿದ್ದ ಅಮೃತಾ ಅವರ ಮೇಲೆ ಗ್ರಾಮಸ್ಥರು ಆಕ್ರೋಶ ಹೊರಹಾಕಿ ಹಲ್ಲೆಗೆ ಯತ್ನಿಸಿದ್ದಾರೆ. ದು. ಮೈಸೂರು ಜಿಲ್ಲೆಯ ಸರಗೂರು ತಾಲೂಕಿನ ಹಳೇ ಹೆಗ್ಗೂಡಿಲು ಗ್ರಾಮದಲ್ಲಿಂದು ರೈತ ಹುಲಿ ದಾಳಿಗೆ ಬಲಿಯಾಗಿದ್ದಾರೆ. ಜಮೀನಿನಲ್ಲಿ ಉಳುಮೆಗೆ ತೆರಳಿದ್ದ ರೈತನ ಮೇಲೆ ಏಕಾಏಕಿ ಹುಲಿ ದಾಳಿ ಮಾಡಿದ ಪರಿಣಾಮ 52 ವರ್ಷದ ದಂಡನಾಯಕ ಮೃತಪಟ್ಟಿದ್ದಾರೆ. ಹುಲಿ ಜಮೀನಿನಲ್ಲಿ ರೈತನನ್ನು ಕೊಂದು ಅರ್ಧ ಕಿಲೋಮೀಟರ್ ದೂರ ಎಳೆದುಕೊಂಡು ಹೋಗಿ ರೈತನ ತೊಡೆ, ತಲೆ ಭಾಗ ತಿಂದಿದ್ದೆ. ನುಗು ವನ್ಯಜೀವಿಧಾಮ ವ್ಯಾಪ್ತಿಯ ಅರಣ್ಯದಲ್ಲಿ ಈ ಘಟನೆ ನಡೆದಿದೆ.

ಮೈಸೂರು ಜಿಲ್ಲೆಯಲ್ಲಿ ಒಂದು ತಿಂಗಳ ಅಂತರದಲ್ಲಿ 4ನೆ ಹುಲಿ ದಾಳಿ ಪ್ರಕರಣ ಇದ್ದಾಗಿದೆ. ಹೆಚ್‌.ಡಿ.ಕೋಟೆ ಹಾಗೂ ಸರಗೂರು ತಾಲೂಕುಗಳಲ್ಲಿ ನಿರಂತರವಾಗಿ ಹುಲಿ ದಾಳಿ ನಡೆಯುತ್ತಿದ್ದು ತಾಲ್ಲೂಕಿನ ಜನರು ಕಂಗಾಲಾಗಿದ್ದಾರೆ.

## ರೈತನನ್ನು ಕೊಂದ ಹುಲಿ ಸೆರೆಗೆ ಈಶ್ವರ್ ಖಂಡ್ರೆ ಆದೇಶ

**ಚಾಮರಾಜನಗರ/ ಬೀದರ್**: ನಾಗರಹೊಳೆ ಮತ್ತು ಬಂಡೀಪುರ ಸಫಾರಿಯನ್ನು ಹಾಗೂ ಮಾನವ-ವನ್ಯಜೀವಿ ಸಂಘರ್ಷ ಇರುವ ಪ್ರದೇಶದಲ್ಲಿ ಚಾರಣವನ್ನು ಇಂದಿನಿಂದಲೇ ಬಂದ್ ಮಾಡಿ, ಹುಲಿ ಸೆರೆ ಕಾರ್ಯಾಚರಣೆಗೆ ಸಿಬ್ಬಂದಿಯನ್ನು ನಿಯೋಜಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಬಿ ಖಂಡ್ರೆ, ಸೂಚಿಸಿದ್ದಾರೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಸೂಚನೆ ನೀಡಿದ್ದಾರೆ. ಸರಗೂರು ತಾಲೂಕು ಮೊಳೆಯೂರು ವಲಯದ ಹಳೆ ಹೆಗ್ಗೋಡಿಲು ಗ್ರಾಮದ ಬಳಿ ಚೌಡಯ್ಯ ನಾಯ್ಕ (35) ಹುಲಿ ದಾಳಿಯಿಂದ ಮೃತಪಟ್ಟಿರುವ ಬಗ್ಗೆ ತೀವ್ರ ನೋವು ವ್ಯಕ್ತಪಡಿಸಿದ್ದಾರೆ.

ಮುಂದಿನ ಆದೇಶದವರೆಗೆ ಎರಡೂ ಕಡೆ ಸಫಾರಿ ಬಂದ್ ಮಾಡಿ, ಅಧಿಕಾರಿ ಮತ್ತು ಸಿಬ್ಬಂದಿಯ ಸೇವೆಯನ್ನು ಹುಲಿ ಸೆರೆ ಕಾರ್ಯಾಚರಣೆ ಬಳಸಿಕೊಳ್ಳುವಂತೆ ನಿರ್ದೇಶನ ನೀಡಿದ್ದಾರೆ. ಮೈಸೂರು ಮತ್ತು ಚಾಮರಾಜನಗರ



ಜಿಲ್ಲೆಯ ಬಂಡೀಪುರ, ನಾಗರಹೊಳೆ ಅರಣ್ಯದಂಚಿನಲ್ಲಿ ಕಳೆದ ಒಂದು ತಿಂಗಳ ಅವಧಿಯಲ್ಲಿ ಹುಲಿ ದಾಳಿಯಿಂದ ಮೂರು ಅಮೂಲ್ಯ ಜೀವ ಹಾನಿ ಆಗಿರುವುದು ಅತೀವ ನೋವು ತಂದಿದೆ ಎಂದು ಅವರು ಹೇಳಿಕೊಂಡಿದ್ದಾರೆ.

ಹುಲಿ ದಾಳಿಯ ನಂತರ ಅಕ್ಟೋಬರ್ 27ರಂದು ಬಂಡೀಪುರದಲ್ಲಿ ಅಧಿಕಾರಿಗಳ ಸಭೆ ನಡೆಸಿ ಹಾಗೂ ಕಳೆದ 2ರಂದು ಚಾಮರಾಜನಗರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಮತ್ತು ಸಮಾಜ ಕಲ್ಯಾಣ ಸಚಿವರಾದ ಡಾ.ಎಚ್.ಸಿ. ಮಹದೇವಪ್ಪ ಹಾಗೂ ಶಾಸಕರುಗಳ ಸಮ್ಮುಖದಲ್ಲಿ ರೈತರು, ಸಾರ್ವಜನಿಕರೊಂದಿಗೆ ಸಂವಾದ ನಡೆಸಿದ್ದರು. ಈ ವೇಳೆ ಹುಲಿ ಸೆರೆಗೆ ಎಲ್ಲ ಸಾಧ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿ, ಜೊತೆಗೆ ಸಫಾರಿ ಬಂದ್ ಮಾಡುವ ಎಚ್ಚರಿಕೆಯನ್ನೂ ನೀಡಿದ್ದರು.

ಇದರ ಬೆನ್ನಲ್ಲೇ ಮತ್ತೊಂದು ದಾಳಿ ನಡೆದಿದೆ ಎಂದು ಅವರು ಬೇಸರ ಹೊರಹಾಕಿದ್ದಾರೆ. ಈ ಹಿನ್ನೆಲೆ ಮುಂದಿನ ಆದೇಶದವರೆಗೆ ಇಂದಿನಿಂದಲೇ ನಾಗರಹೊಳೆ ಮತ್ತು ಬಂಡೀಪುರದಲ್ಲಿ ಸಫಾರಿ ಬಂದ್ ಮಾಡಲು ಮತ್ತು ಮಾನವ-ವನ್ಯಜೀವಿ ಸಂಘರ್ಷ ಇರುವ ಪ್ರದೇಶದಲ್ಲಿ ಟ್ರಕ್ಕಿಂಗ್ (ಚಾರಣ) ಸ್ಥಗಿತಗೊಳಿಸಲು ಆದೇಶಿಸಲಾಗಿದೆ.

ಬಂಡೀಪುರ, ನಾಗರಹೊಳೆ ಸಫಾರಿಯ ಕಾರ್ಯದಲ್ಲಿ ನಿಯೋಜನೆಗೊಂಡಿರುವ ಎಲ್ಲ ಅಧಿಕಾರಿಗಳು ಮತ್ತು ವಾಹನ ಚಾಲಕರ ಸಹಿತ ಎಲ್ಲ ಸಿಬ್ಬಂದಿ ಹುಲಿ ಸೆರೆ ಕಾರ್ಯಾಚರಣೆಗೆ ನಿಯೋಜನೆ ಮಾಡಲು ಹಾಗೂ ವನ್ಯಜೀವಿ ವಿಭಾಗದ ಎಪಿಸಿಸಿಎಫ್ ಮತ್ತು ಹುಲಿ ಯೋಜನೆಯ ನಿರ್ದೇಶಕರು ಸ್ಥಳದಲ್ಲೇ ಮೊಕ್ಕಾಂ ಹೂಡಿ ಪದೆ ಪದೇ ದಾಳಿ ಮಾಡುತ್ತಿರುವ ಹುಲಿಯನ್ನು ಹಿಡಿಯಲು ಕ್ರಮ ಕೈಗೊಳ್ಳುವಂತೆ ಸ್ಪಷ್ಟ ಸೂಚನೆ ನೀಡಿದ್ದಾರೆ.

## ಕೆಮ್ಮಿನ ಸಿರಪ್‌ನಿಂದ ಇಬ್ಬರು ಮಕ್ಕಳ ಸಾವು

ಜೈಪುರ: ರಾಜಸ್ಥಾನದ ಸರ್ಕಾರಿ ಆಸ್ಪತ್ರೆಗಳಿಗೆ ಕೇಸನ್ ಫಾರ್ಮಾ ಕಂಪನಿಯಿಂದ ಪೂರೈಕೆಯಾದ ಜೆನೆರಿಕ್ ಕೆಮ್ಮಿನ ಸಿರಪ್ ಸೇವಿಸಿದ ಇಬ್ಬರು ಮಕ್ಕಳು ಕಳೆದ ಎರಡು ವಾರಗಳಲ್ಲಿ ಸಾವನ್ನಪ್ಪಿದ್ದಾರೆ. ಕನಿಷ್ಠ 10 ಜನರು ಗಂಭೀರವಾಗಿ ಅನಾರೋಗ್ಯಕ್ಕೆ ಒಳಗಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸಿರಪ್ ಸುರಕ್ಷಿತವೆಂದು ಸಾಬೀತುಪಡಿಸಲು ಡೋಸ್ ತೆಗೆದುಕೊಂಡ ವೈದ್ಯರು ಮತ್ತು ಆಂಬ್ಯುಲೆನ್ಸ್ ಚಾಲಕ ಕೂಡ ಪ್ರಜ್ಞಾಹೀನರಾಗಿದ್ದಾರೆ.

ರಾಜಸ್ಥಾನದ ಸಿಕಾರ್ ಜಿಲ್ಲೆಯ 5 ವರ್ಷದ ಬಾಲಕ ನಿತೀಶ್‌ಗೆ ಕೆಮ್ಮು ಮತ್ತು ಶೀತದ ಲಕ್ಷಣಗಳು ಕಾಣಿಸಿಕೊಂಡಿತ್ತು. ಭಾನುವಾರ, ಸೆಪ್ಟೆಂಬರ್ 28, 2025ರಂದು, ಅವನ ಪೋಷಕರು ಚಿರಾನಾದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದರು. ಅಲ್ಲಿ ವೈದ್ಯರು ಕೇಸನ್ ಫಾರ್ಮಾ ತಯಾರಿಸಿದ ಡೆಕ್ಸ್ಟ್ರೋಮೆಥೋರ್ಫಾನ್ ಹೈಡ್ರೋಬ್ರೋಮೈಡ್ ಒಳಗೊಂಡ ಕೆಮ್ಮಿನ ಸಿರಪ್ ನೀಡಿದರು. ರಾತ್ರಿ 11:30ರ ಸುಮಾರಿಗೆ ನಿತೀಶ್‌ನ ತಾಯಿ ಔಷಧವನ್ನು ನೀಡಿದರು. ಬೆಳಗಿನ ಜಾವ 3 ಗಂಟೆಗೆ ನಿತೀಶ್ ಬಿಕ್ಕಳಿಸುತ್ತಿದ್ದನು. ತಾಯಿ ಸ್ವಲ್ಪ ನೀರು ಕೊಟ್ಟಾಗ, ಅವನು ಮಲಗಿದನು ಆದರೆ ಮತ್ತೆ ಎಚ್ಚರಗೊಳ್ಳಲಿಲ್ಲ. ಬೆಳಿಗ್ಗೆ 5 ಗಂಟೆಗೆ ಆಸ್ಪತ್ರೆಗೆ ಕರೆದೊಯ್ದಾಗ ವೈದ್ಯರು ನಿತೀಶ್ ಸಾವನ್ನಪ್ಪಿದ್ದಾನೆ ಎಂದು ಘೋಷಿಸಿದರು.

ನಿತೀಶ್‌ನ ಚಿಕ್ಕಪ್ಪ ಪ್ರಿಯಕಾಂತ್ ಶರ್ಮಾ, ನಿತೀಶ್ ಇಡೀ ದಿನ ಆರೋಗ್ಯವಾಗಿದ್ದ. ಸಂಜೆ ನವರಾತ್ರಿ, ಕಾರ್ಯಕ್ರಮಕ್ಕೂ ಹೋಗಿದ್ದ. ರಾತ್ರಿ ಕೆಮ್ಮಿನ ಔಷಧ ನೀಡಿದ ಬಳಿಕ ಈ ದುರಂತ ಸಂಭವಿಸಿತು. ಔಷಧ ನೀಡುವ ಮೊದಲು ಅವನು ಚೆನ್ನಾಗಿದ್ದ ಎಂದು ಹೇಳಿದ್ದಾರೆ.

ಇದೇ ತಿಂಗಳ ಆರಂಭದಲ್ಲಿ, ಸೆಪ್ಟೆಂಬರ್ 22ರಂದು, 2 ವರ್ಷದ ಸಾಮ್ರಾಟ್ ಜಾತವ್ ಕೂಡ ಇದೇ ಕೆಮ್ಮಿನ ಸಿರಪ್ ಸೇವಿಸಿ ಸಾವನ್ನಪ್ಪಿದ. ಸಾಮ್ರಾಟ್, ಅವನ ಸಹೋದರಿ ಸಾಕ್ಷಿ ಮತ್ತು ಸೋದರ ಸಂಬಂಧಿ ವಿರಾಟ್‌ಗೆ ಕೆಮ್ಮು ಮತ್ತು ಶೀತದ ಲಕ್ಷಣಗಳಿದ್ದವು. ಸಾಮ್ರಾಟ್‌ನ ತಾಯಿ ಜ್ಯೋತಿ ಸ್ಥಳೀಯ ಸಾರ್ವಜನಿಕ ಆರೋಗ್ಯ ಕೇಂದ್ರದಿಂದ ಅದೇ ಸಿರಪ್ ತಂದು ಮಧ್ಯಾಹ್ನ 1:30ಕ್ಕೆ ಮೂರೂ ಮಕ್ಕಳಿಗೆ ನೀಡಿದ್ದರು. ಐದು ಗಂಟೆಗಳ ನಂತರ ಮಕ್ಕಳು ಎಚ್ಚರಗೊಳ್ಳದಿದ್ದಾಗ ಕುಟುಂಬ ಆತಂಕಗೊಂಡಿತು. ಸಾಕ್ಷಿ ಮತ್ತು ವಿರಾಟ್ ವಾಂತಿಯ ನಂತರ ಎಚ್ಚರಗೊಂಡರಾದರೂ, ಸಾಮ್ರಾಟ್ ಪ್ರಜ್ಞಾಹೀನನಾಗಿದ್ದ. ಭರತ್‌ಪುರದ ಆಸ್ಪತ್ರೆಗೆ ಕರೆದೊಯ್ದರೂ, ಜೈಪುರದ ಜೆಕೆ ಲೋನ್ ಆಸ್ಪತ್ರೆಯಲ್ಲಿ ಸಾಮ್ರಾಟ್ ಸಾವನ್ನಪ್ಪಿದ.

ರಾಜಸ್ಥಾನದ ಸಿಕಾರ್ ಜಿಲ್ಲೆಯ 5 ವರ್ಷದ ಬಾಲಕ ನಿತೀಶ್‌ಗೆ ಕೆಮ್ಮು ಮತ್ತು ಶೀತದ ಲಕ್ಷಣಗಳು ಕಾಣಿಸಿಕೊಂಡಿತ್ತು. ಭಾನುವಾರ, ಸೆಪ್ಟೆಂಬರ್ 28, 2025ರಂದು, ಅವನ ಪೋಷಕರು ಚಿರಾನಾದ ಸಮುದಾಯ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದರು. ಅಲ್ಲಿ ವೈದ್ಯರು ಕೇಸನ್ ಫಾರ್ಮಾ ತಯಾರಿಸಿದ ಡೆಕ್ಸ್ಟ್ರೋಮೆಥೋರ್ಫಾನ್ ಹೈಡ್ರೋಬ್ರೋಮೈಡ್ ಒಳಗೊಂಡ ಕೆಮ್ಮಿನ ಸಿರಪ್ ನೀಡಿದರು. ರಾತ್ರಿ 11:30ರ ಸುಮಾರಿಗೆ ನಿತೀಶ್‌ನ ತಾಯಿ ಔಷಧವನ್ನು ನೀಡಿದರು. ಬೆಳಗಿನ ಜಾವ 3 ಗಂಟೆಗೆ ನಿತೀಶ್ ಬಿಕ್ಕಳಿಸುತ್ತಿದ್ದನು. ತಾಯಿ ಸ್ವಲ್ಪ ನೀರು ಕೊಟ್ಟಾಗ, ಅವನು ಮಲಗಿದನು ಆದರೆ ಮತ್ತೆ ಎಚ್ಚರಗೊಳ್ಳಲಿಲ್ಲ. ಬೆಳಿಗ್ಗೆ 5 ಗಂಟೆಗೆ ಆಸ್ಪತ್ರೆಗೆ ಕರೆದೊಯ್ದಾಗ ವೈದ್ಯರು ನಿತೀಶ್ ಸಾವನ್ನಪ್ಪಿದ್ದಾನೆ ಎಂದು ಘೋಷಿಸಿದರು.

ನಿತೀಶ್‌ನ ಚಿಕ್ಕಪ್ಪ ಪ್ರಿಯಕಾಂತ್ ಶರ್ಮಾ, ನಿತೀಶ್ ಇಡೀ ದಿನ ಆರೋಗ್ಯವಾಗಿದ್ದ. ಸಂಜೆ ನವರಾತ್ರಿ, ಕಾರ್ಯಕ್ರಮಕ್ಕೂ ಹೋಗಿದ್ದ. ರಾತ್ರಿ ಕೆಮ್ಮಿನ ಔಷಧ ನೀಡಿದ ಬಳಿಕ ಈ ದುರಂತ ಸಂಭವಿಸಿತು. ಔಷಧ ನೀಡುವ ಮೊದಲು ಅವನು ಚೆನ್ನಾಗಿದ್ದ ಎಂದು ಹೇಳಿದ್ದಾರೆ.

ಇದೇ ತಿಂಗಳ ಆರಂಭದಲ್ಲಿ, ಸೆಪ್ಟೆಂಬರ್ 22ರಂದು, 2 ವರ್ಷದ ಸಾಮ್ರಾಟ್ ಜಾತವ್ ಕೂಡ ಇದೇ ಕೆಮ್ಮಿನ ಸಿರಪ್ ಸೇವಿಸಿ ಸಾವನ್ನಪ್ಪಿದ. ಸಾಮ್ರಾಟ್, ಅವನ ಸಹೋದರಿ ಸಾಕ್ಷಿ ಮತ್ತು ಸೋದರ ಸಂಬಂಧಿ ವಿರಾಟ್‌ಗೆ ಕೆಮ್ಮು ಮತ್ತು ಶೀತದ ಲಕ್ಷಣಗಳಿದ್ದವು. ಸಾಮ್ರಾಟ್‌ನ ತಾಯಿ ಜ್ಯೋತಿ ಸ್ಥಳೀಯ ಸಾರ್ವಜನಿಕ ಆರೋಗ್ಯ ಕೇಂದ್ರದಿಂದ ಅದೇ ಸಿರಪ್ ತಂದು ಮಧ್ಯಾಹ್ನ 1:30ಕ್ಕೆ ಮೂರೂ ಮಕ್ಕಳಿಗೆ ನೀಡಿದ್ದರು.

ಐದು ಗಂಟೆಗಳ ನಂತರ ಮಕ್ಕಳು ಎಚ್ಚರಗೊಳ್ಳದಿದ್ದಾಗ ಕುಟುಂಬ ಆತಂಕಗೊಂಡಿತು. ಸಾಕ್ಷಿ ಮತ್ತು ವಿರಾಟ್ ವಾಂತಿಯ ನಂತರ ಎಚ್ಚರಗೊಂಡರಾದರೂ, ಸಾಮ್ರಾಟ್ ಪ್ರಜ್ಞಾಹೀನನಾಗಿದ್ದ. ಭರತ್‌ಪುರದ ಆಸ್ಪತ್ರೆಗೆ ಕರೆದೊಯ್ದರೂ, ಜೈಪುರದ ಜೆಕೆ ಲೋನ್ ಆಸ್ಪತ್ರೆಯಲ್ಲಿ ಸಾಮ್ರಾಟ್ ಸಾವನ್ನಪ್ಪಿದ.

## ಬೆಡ್‌ಶೀಟ್ ವಿಚಾರಕ್ಕೆ ಜಗಳ – ಚಲಿಸುತ್ತಿದ್ದ ರೈಲಿನಲ್ಲಿ ಸೈನಿಕನ ಕೊಲೆ





**ಜೈಪುರ:** ರಾಜಸ್ಥಾನದಲ್ಲಿ ಚಲಿಸುವ ರೈಲಿನಲ್ಲಿ ಸೈನಿಕನ ಹತ್ಯೆಯ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಬೇಕೆಂದು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಒತ್ತಾಯಿಸಿದೆ.

ಆರೋಪಿ ರೈಲ್ವೆ ಸಿಬ್ಬಂದಿ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಸೈನಿಕನ ಕುಟುಂಬಕ್ಕೆ ನ್ಯಾಯ ಮತ್ತು ಪರಿಹಾರವನ್ನು ಒದಗಿಸುವುದಾಗಿ ಮಾನವ ಹಕ್ಕುಗಳ ಸಂಸ್ಥೆ ಪ್ರತಿಜ್ಞೆ ಮಾಡಿದೆ. ಕಂಬಳಿ ಮತ್ತು ಹಾಸಿಗೆಯ ವಿಚಾರದಲ್ಲಿ ನಡೆದ ಜಗಳದಲ್ಲಿ ಸೈನಿಕನನ್ನು ರೈಲ್ವೆ ಸಿಬ್ಬಂದಿಯಾಗಿದ್ದ ಕೋಚ್ ಅಟೆಂಡೆಂಟ್ ಹತ್ಯೆ ಮಾಡಿದ್ದಾನೆ ಎಂದು ರೈಲ್ವೆ ಇಲಾಖೆ ತಿಳಿಸಿದೆ. ಬಿಕಾನೆರ್ ತಲುಪಿದ ನಂತರ, ಸರ್ಕಾರಿ ರೈಲ್ವೆ ಪೊಲೀಸರು ಪ್ರಯಾಣ ಟಿಕೆಟ್ ಪರೀಕ್ಷಕರ (ಟಿಟಿಇ) ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಸೆಕ್ಷನ್ 103(1) ರ ಅಡಿಯಲ್ಲಿ ಕೊಲೆ ಪ್ರಕರಣ ದಾಖಲಿಸಲಾಗಿದೆ.

ಆರೋಪಿ ಸಹಾಯಕ ಜುಬೈರ್ ಮೆಮನ್ ಎಂದು ಗುರುತಿಸಲಾಗಿದ್ದು, ಆತನನ್ನು ಬಂಧಿಸಿ ಕೊಲೆಗೆ ಬಳಸಲಾದ ಚಾಕುವನ್ನು ವಶಕ್ಕೆ ಪಡೆಯಲಾಗಿದೆ. ಜುಬೈರ್‌ನನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿತ್ತು. ಈಗ ಆತನನ್ನು ಸೇವೆಯಿಂದ ತೆಗೆದುಹಾಕಲಾಗಿದೆ. ಭಾರತೀಯ ಸೇನಾ ಸಿಬ್ಬಂದಿ ಜಿಗರ್ ಚೌಧರಿ ಕೆಲವು ದಿನಗಳ ರಜೆ ತೆಗೆದುಕೊಂಡು ಗುಜರಾತ್‌ನ ಸಬರಮತಿಯಲ್ಲಿರುವ ತಮ್ಮ ಮನೆಗೆ ಪ್ರಯಾಣಿಸುತ್ತಿದ್ದರು. ನ.2 ರ ರಾತ್ರಿ, ಅವರು ಪಂಜಾಬ್‌ನ ಫಿರೋಜ್‌ಪುರ ನಿಲ್ದಾಣದಿಂದ 19224 ರ ಜಮ್ಮು ತಾವಿ – ಸಬರಮತಿ ಎಕ್ಸ್‌ಪ್ರೆಸ್‌ನ ಸ್ಲೀಪರ್ ಕೋಚ್ ಅನ್ನು ಹತ್ತಿದರು. ಪ್ರಯಾಣದ ಸಮಯದಲ್ಲಿ, ಅವರು B4 AC ಕೋಚ್‌ನ ಸಹಾಯಕರಿಂದ ಬ್ಲಾಂಕೆಟ್, ಬೆಡ್‌ಶೀಟ್ ಕೇಳಿದ್ದರು.

ನಿಯಮಗಳ ಪ್ರಕಾರ ಒಂದನ್ನು ಒದಗಿಸಲು ಪರಿಚಾರಕ ನಿರಾಕರಿಸಿದ್ದಾನೆ ಎನ್ನಲಾಗಿದೆ. ಇದು ಇಬ್ಬರ ನಡುವೆ ವಾಗ್ವಾದಕ್ಕೆ ಕಾರಣವಾಯಿತು. ಜಗಳ ವಿಕೋಪಕ್ಕೆ ತಿರುಗಿ ಸೈನಿಕನಿಗೆ ರೈಲ್ವೆ ಸಿಬ್ಬಂದಿ ಚಾಕುವಿನಿಂದ ಇರಿದಿದ್ದಾನೆ. ಗಂಭೀರ ಗಾಯಗೊಂಡ ಸೈನಿಕ ಸ್ಥಳದಲ್ಲೇ ಮೃತಪಟ್ಟಿದ್ದಾರೆ

## ಪ್ರಿಯಕರನ ಕಿರುಕುಳಕ್ಕೆ ಬೇಸತ್ತು ಪ್ರೇಯಸಿ ಆತ್ಮಹತ್ಯೆ



**ಹಾಸನ**: ಪ್ರಿಯಕರನ ಕಿರುಕುಳಕ್ಕೆ ಬೇಸತ್ತು ಪ್ರೇಯಸಿ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಘಟನೆ ನಡೆದು ವಾರ ಕಳೆದರೂ ಆರೋಪಿಯನ್ನ ಪೊಲೀಸರು ಬಂಧಿಸಿಲ್ಲ ಎಂದು ಹೆತ್ತವರ ಕಣ್ಣೀರಿಡುತ್ತಿರುವ ಘಟನೆ ಹಾಸನ) ತಾಲ್ಲೂಕಿನ, ಜಾಗರವಳ್ಳಿ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಜಯರಾಮ್‌ನಾಯ್ಕ್ ಹಾಗೂ ಶೋಭಾ ದಂಪತಿ ಪುತ್ರಿ ಪ್ರಿಯಾಂಕಾ (21) ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಅಕೌಂಟೆಂಟ್ ಕೆಲಸ ಮಾಡುತ್ತಿದ್ದು ನಾಗಸಂದ್ರದ ಶಿವಪುರದಲ್ಲಿ ಬಾಡಿಗೆ ಮನೆಯಲ್ಲಿ ವಾಸವಿದ್ದರು. ಪ್ರಿಯಾಂಕಾಗೆ ಆಲೂರು ತಾಲ್ಲೂಕು ಮೂಲದ ಸುಮಂತ್ ಪರಿಚಯವಾಗಿ ಕಳೆದ ಮೂರು ತಿಂಗಳಿನಿಂದ ಪರಸ್ಪರ ಪ್ರೀತಿಸುತ್ತಿದ್ದರು. ತಾನು ಪ್ರೀತಿಸುತ್ತಿದ್ದ ಯುವತಿ ವಯಸ್ಸಿನಲ್ಲಿ ತನಗಿಂತ ಎರಡು ವರ್ಷ ದೊಡ್ಡವಳಾಗಿದ್ದರೂ ಮದುವೆಯಾಗಲು ನಿಶ್ಚಯಿಸಿದ್ದರು. ಆದ್ರೆ ಯುವಕ ತನ್ನ ಪ್ರೇಯಸಿ ಮೇಲೆ ಅನುಮಾನಗೊಂಡು ಕಿರುಕುಳ ನೀಡುತ್ತಿದ್ದ.

ನೀನು ನನಗೆ ಬೇಡ ಆತ್ಮಹತ್ಯೆ ಮಾಡಿಕೋ ಎಂದು ಪದೇ ಪದೇ ಮಾನಸಿಕ ಹಿಂಸೆ ನೀಡುತ್ತಿದ್ದ. ಇದರಿಂದ ಬೇಸತ್ತ ಪ್ರಿಯಾಂಕಾ ತಾನು ವಾಸವಿದ್ದ ಮನೆಯಲ್ಲಿಯೇ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಳು. ಆತ್ಮಹತ್ಯೆ ಮಾಡಿಕೊಳ್ಳುವ ಕೊನೇ ಕ್ಷಣದಲ್ಲಿ ಸುಮಂತ್ ಒತ್ತಡ ಹಾಕಿರುವ ಬಗ್ಗೆ ತನ್ನ ಮೊಬೈಲ್‌ನಲ್ಲಿ ಆಡಿಯೋ ರೆಕಾರ್ಡ್ ಮಾಡಿದ್ದು ಮೊಬೈಲನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ

ತಮ್ಮ ಮಗಳು ಆತ್ಮಹತ್ಯೆ ಮಾಡಿಕೊಳ್ಳಲು ಸುಮಂತ್ ಕಿರುಕುಳ ಹಾಗೂ ಪ್ರಚೋದನೆಯೇ ಕಾರಣವಾಗಿದ್ದು ಆತನ ವಿರುದ್ಧ ಬೆಂಗಳೂರಿನ ಪೀಣ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕೇಸ್ ದಾಖಲಾಗಿದ್ದೂ ಆರೋಪಿಯನ್ನ ಪೊಲೀಸರು ಬಂಧಿಸಿಲ್ಲ. ಹೀಗಾಗಿ ಕೂಡಲೇ ಆರೋಪಿಯನ್ನ ಬಂಧಿಸದಿದ್ದರೆ ಠಾಣೆ ಎದುರೇ ಅನಿರ್ದಿಷ್ಟಾವಧಿ ಧರಣಿ ನಡೆಸುವುದಾಗಿ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

